# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೇಳನೆಯ ಅಧಿವೇಶನ

## ಪೂರಕ ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ:18ನೇ ಡಿಸೆಂಬರ್, 2025**

* * *

**ಕ್ರಮ ಸಂಖ್ಯೆ: 3ರಲ್ಲಿ ಈ ಕೆಳಕಂಡ ಬಾಬ್ತನ್ನು ಸೇರಿಸಿಕೊಳ್ಳತಕ್ಕದ್ದು**

**ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು**

**ಕಾರ್ಯದರ್ಶಿಯವರು:**

**ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ ಔಷಧ ಮತ್ತು ಪ್ರಸಾಧನ ಸಾಮಗ್ರಿ (ಕರ್ನಾಟಕ ತಿದ್ದುಪಡಿ) ವಿಧೇಯಕ ಹಾಗೂ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದಿಡುವುದು.**

4. ಕರ್ನಾಟಕ ಧನವಿನಿಯೋಗ (ಸಂಖ್ಯೆ:04) ವಿಧೇಯಕ, 2025
5. ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025
6. ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025
7. ಬಾಂಬೆ ಸಾರ್ವಜನಿಕ ನ್ಯಾಸ (ಕರ್ನಾಟಕ ತಿದ್ದುಪಡಿ) ವಿಧೇಯಕ, 2025

**ಕ್ರಮ ಸಂಖ್ಯೆ: 4ರಲ್ಲಿ ಈ ಕೆಳಕಂಡ ಬಾಬ್ತನ್ನು ಸೇರಿಸಿಕೊಳ್ಳತಕ್ಕದ್ದು**

**ಶಾಸನ ರಚನೆ**

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

03. ಕರ್ನಾಟಕ ಧನವಿನಿಯೋಗ (ಸಂಖ್ಯೆ: 04) ವಿಧೇಯಕ, 2025
**ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ "ಕರ್ನಾಟಕ ಧನವಿನಿಯೋಗ (ಸಂಖ್ಯೆ:04) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

..2..

04. ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025
**ಶ್ರೀ ಡಿ.ಕೆ. ಶಿವಕುಮಾರ್ (ಮಾನ್ಯ ಉಪ ಮುಖ್ಯಮಂತ್ರಿಗಳು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ "ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

05. ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025
**ಶ್ರೀ ರಾಮಲಿಂಗಾ ರೆಡ್ಡಿ (ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ "ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

06. ಬಾಂಬೆ ಸಾರ್ವಜನಿಕ ನ್ಯಾಸ (ಕರ್ನಾಟಕ ತಿದ್ದುಪಡಿ) ವಿಧೇಯಕ, 2025
**ಶ್ರೀ ರಾಮಲಿಂಗಾ ರೆಡ್ಡಿ (ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ "ಬಾಂಬೆ ಸಾರ್ವಜನಿಕ ನ್ಯಾಸ (ಕರ್ನಾಟಕ ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

07. ಔಷಧ ಮತ್ತು ಪ್ರಸಾಧನ ಸಾಮಗ್ರಿ (ಕರ್ನಾಟಕ ತಿದ್ದುಪಡಿ) ವಿಧೇಯಕ, 2025
**ಶ್ರೀ ದಿನೇಶ್ ಗುಂಡೂರಾವ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)**

ಅ) ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ "ಔಷಧ ಮತ್ತು ಪ್ರಸಾಧನ ಸಾಮಗ್ರಿ (ಕರ್ನಾಟಕ ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**ಕ್ರಮ ಸಂಖ್ಯೆ: 4ರ ನಂತರ ಈ ಕೆಳಕಂಡ ಬಾಬ್ತನ್ನು ಸೇರಿಸಿಕೊಳ್ಳತಕ್ಕದ್ದು**

## 4ಎ. ಅಧಿಕೃತ ನಿರ್ಣಯಗಳು

**ಶ್ರೀ ಎಚ್.ಕೆ. ಪಾಟೀಲ್ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು) ಅವರು ಈ ಕೆಳಕಂಡ ನಿರ್ಣಯಗಳನ್ನು ಮಂಡಿಸುವುದು:–**

1) ಕಲ್ಯಾಣ ಕರ್ನಾಟಕ ಪ್ರದೇಶದ ಬಹು ದಿನಗಳ ಬೇಡಿಕೆಯಾದ ರಾಯಚೂರು ಜಿಲ್ಲೆಯಲ್ಲಿ ತಕ್ಷಣವೇ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆ (AIIMS) ಅನ್ನು ಸ್ಥಾಪಿಸಲು ಭಾರತ ಸರ್ಕಾರಕ್ಕೆ ಆಗ್ರಹಿಸಲು ಮತ್ತು ಈ ಸಂಬಂಧದಲ್ಲಿ ಮುಖ್ಯಮಂತ್ರಿಯವರ ಪತ್ರಗಳು ಹಾಗೂ ನಿರಂತರ ಪ್ರಯತ್ನಗಳ ಪೂರಕವಾಗಿರುವ ನಿರ್ಣಯವನ್ನು ಈ ಸದನವು ಸರ್ವಾನುಮತದಿಂದ ನಿರ್ಣಯಿಸುತ್ತದೆ.

2) ಕರ್ನಾಟಕದಲ್ಲಿ ಬೆಂಗಳೂರು-ಮೈಸೂರು ಪ್ರದೇಶದಲ್ಲಿ ಮಾತ್ರ ಕೇಂದ್ರಿಕೃತವಾಗಿರುವ 73 ರಾಷ್ಟ್ರೀಯ ಪ್ರಾಮುಖ್ಯತೆಯ ಕೇಂದ್ರ ಸರ್ಕಾರದ ಸಂಸ್ಥೆಗಳನ್ನು ಗುರುತಿಸಿ, ಅವುಗಳಲ್ಲಿ ಕನಿಷ್ಟ 25 ಪ್ರಮುಖ ಸಂಶೋಧನಾ ಸಂಸ್ಥೆಗಳು ಸೇರಿದಂತೆ, ಉತ್ತರ ಕರ್ನಾಟಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ವರ್ಗಾಯಿಸಲು ಭಾರತ ಸರ್ಕಾರವನ್ನು ಆಗ್ರಹಿಸಲು ಈ ಸದನವು ಸರ್ವಾನುಮತದಿಂದ ನಿರ್ಣಯಿಸುತ್ತದೆ.

3) ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3 (UKP-III)ನ್ನು ತಕ್ಷಣವೇ ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸಲು, ಕೇಂದ್ರ ಅನುದಾನ ಬಿಡುಗಡೆ ಮಾಡಲು ಮತ್ತು ಕೃಷ್ಣಾ ಜಲವಿವಾದ ನ್ಯಾಯಾಧಿಕರಣ-2 (KWDT-II)ರ ಅಂತಿಮ ತೀರ್ಪಿನ ಗೆಜೆಟ್ ಅಧಿಸೂಚನೆಗೆ ಒತ್ತಾಯಿಸಲು ಈ ಸದನವು ಸರ್ವಾನುಮತದಿಂದ ನಿರ್ಣಯಿಸುತ್ತದೆ.

4) ಕಲ್ಯಾಣ ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಮಂಡಳಿಗೆ ರೂ.5000 ಕೋಟಿ ಹೊಂದಾಣಿಕೆ ಅನುದಾನವನ್ನು ವಿದರ್ಭ ಅಭಿವೃದ್ಧಿ ಮಾದರಿಯಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆ ಮಾಡುವಂತೆ ಆಗ್ರಹಿಸಲು ಈ ಸದನವು ಸರ್ವಾನುಮತದಿಂದ ನಿರ್ಣಯಿಸುತ್ತದೆ.

5) ಕರ್ನಾಟಕದಲ್ಲಿ ಕಬ್ಬು ಮತ್ತು ಇತರೆ ಕಚ್ಚಾ ವಸ್ತುಗಳನ್ನು ಆಧರಿಸಿ ಉತ್ಪಾದಿಸುವ ಎಥೆನಾಲ್ ಸಾಮರ್ಥ್ಯಕ್ಕೆ ಅನುಗುಣವಾಗಿ ತಾರತಮ್ಯ ಮಾಡದೇ ಸಮಾನವಾದ ಎಥೆನಾಲ್ ಸಂಗ್ರಹಣೆ ಪ್ರಮಾಣವನ್ನು ನಿಗದಿಪಡಿಸಿ ರೈತರ ರಕ್ಷಣೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಒತ್ತಾಯಿಸಲು ಈ ಸದನವು ಸರ್ವಾನುಮತದಿಂದ ನಿರ್ಣಯಿಸುತ್ತದೆ.

6) ಮಹದಾಯಿ ನ್ಯಾಯಾಧಿಕರಣದ ತೀರ್ಪಿನನ್ವಯ ಕುಡಿಯುವ ನೀರು ಪೂರೈಕೆಯ ಮಹತ್ವಾಕಾಂಕ್ಷೆಯ ಕಳಸಾ-ಬಂಡೂರಿ ನಾಲಾ ತಿರುವು ಯೋಜನೆಗೆ ಅಗತ್ಯವಿರುವ ಅರಣ್ಯ ಮತ್ತು ವನ್ಯಜೀವಿ ಮಂಡಳಿಗಳ ಅನುಮೋದನೆಗಳನ್ನು ತ್ವರಿತವಾಗಿ ಒದಗಿಸಲು ಭಾರತ ಸರ್ಕಾರದ ತುರ್ತು ಕ್ರಮಕ್ಕಾಗಿ ಒತ್ತಾಯಿಸಲು ಈ ಸದನವು ಸರ್ವಾನುಮತದಿಂದ ನಿರ್ಣಯಿಸುತ್ತದೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**